ಅಧ್ಯಕ್ಷರು: *ವಿಧೇಯಕವನ್ನು ಮಂಡಿಸಲಾಗಿದೆ.*

(3) ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕ 1997

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ ''1997ರ ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: *ವಿಧೇಯಕವನ್ನು ಮಂಡಿಸಲಾಗಿದೆ.*

(4) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕ, 1997

ಶ್ರೀ ಹೆಚ್.ನಾಗಪ್ಪ (ಕೃಷಿ ಮಾರುಕಟ್ಟೆಯ ರಾಜ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ: ''1997ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಶೆಚ್.ನಾಗಪ್ಪ (ಮಾನ್ಯ ಕೃಷಿ ಮಾರುಕಟ್ಟೆಯ ರಾಜ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: *ವಿಧೇಯಕವನ್ನು ಮಂಡಿಸಲಾಗಿದೆ*

---

* ಅನುಬಂಧ III, IV & V